## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 500 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನ ಸಭಾಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.12.2025 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯ ಸರ್ಕಾರವು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಸರ್ಕಾರಿ ನೌಕರರಿಗೆ ಪರಿಷ್ಕೃತ ವೇತನ ಶ್ರೇಣಿಗಳನ್ನು ದಿನಾಂಕ 01.07.2022ರಿಂದ ಜಾರಿಗೊಳಿಸಿ, ಆರ್ಥಿಕ ಸೌಲಭ್ಯವನ್ನು ದಿನಾಂಕ 01.08.2024 ರಿಂದ ಅನ್ವಯಿಸುವಂತೆ ಆದೇಶ ಹೊರಡಿಸಿದ್ದು, ದಿನಾಂಕ 01.07.2022 ರಿಂದ 31.07.2024ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಪರಿಷ್ಕೃತ ವೇತನ ಶ್ರೇಣಿಯ ವೇತನದಂತೆ ನಿವೃತ್ತಿ ನಂತರದ ಸೌಲಭ್ಯಗಳಾದ ಡಿ.ಸಿ.ಆರ್.ಜಿ, ಕಮ್ಯುಟೇಶನ್, ಹಾಗೂ ಗಳಿಕೆ ರಜೆ ನಗದೀಕರಣಗಳನ್ನು ನೀಡದೇ ಹಳೆಯ ವೇತನ ಶ್ರೇಣಿಯಲ್ಲಿ ನೀಡಿರುವುದರಿಂದ "ವ್ಯತ್ಯಾಸದ ಮೊತ್ತವನ್ನು" ನೀಡದಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು;</td><td rowspan="2">7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ರಾಜಸ್ವ ನೀತಿಯನ್ನು ಗಮನದಲ್ಲಿರಿಸಿ ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಗಳನ್ನು ದಿನಾಂಕ:1.7.2022 ರಿಂದ ಅನ್ವಯಿಸುವಂತೆ ಪರಿಷ್ಕರಿಸಿ ದಿನಾಂಕ: 1.8.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. ಇದು ಸರ್ಕಾರದ ನೀತಿ ನಿರ್ಣಯವಾಗಿರುತ್ತದೆ.<br><br>ಈ ಮೇಲಿನ ನಿರ್ಧಾರದಂತೆ ಅಂದರೆ, 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ದಿನಾಂಕ:1.8.2024 ರಿಂದ ಅನುಷ್ಠಾನಗೊಳಿಸಿರುವುದರಿಂದ, ದಿನಾಂಕ: 1.7.2022 ರಿಂದ ದಿನಾಂಕ:31.7.2024 ರ ಅವಧಿಯಲ್ಲಿನ ನಿವೃತ್ತರಾದ ನೌಕರರ ಪ್ರಕರಣಗಳಲ್ಲಿ ನೌಕರರ ನಿವೃತ್ತಿ ಸಮಯದಲ್ಲಿ, ನಿಯಮಾನುಸಾರ ಲಭ್ಯವಿರುವ DCRG, ಪರಿವರ್ತಿತ ಪಿಂಚಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ಅವರು ಪಡೆಯುತ್ತಿರುವ 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿನ ಮೂಲ ವೇತನವನ್ನು ಆಧಾರವಾಗಿರಿಸಿ ಪಾವತಿ ಮಾಡತಕ್ಕದ್ದಾಗಿರುತ್ತದೆ. ಆದಾಗ್ಯೂ, ಈ ಅವಧಿಯಲ್ಲಿ ನಿವೃತ್ತರಾದ ನೌಕರರ ಪ್ರಕರಣಗಳಲ್ಲಿ, ಅವರ ಪಿಂಚಣಿಯನ್ನು 2024ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಕಾಲ್ಪನಿಕವಾಗಿ ನಿಗದಿಪಡಿಸಲಾದ ಮೂಲ ವೇತನವನ್ನು ಆಧಾರವಾಗಿರಿಸಿ ಹೆಚ್ಚಿನ ಪಿಂಚಣಿಯನ್ನು ದಿನಾಂಕ: 1.8.2024 ರಿಂದ ಪಾವತಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಸರ್ಕಾರದ ಈ ನಿರ್ಧಾರವು ನೌಕರರಿಗೆ ಲಾಭದಾಯಕವಾಗಿರುತ್ತದೆ.<br><br>ಈ ಅವಧಿಯಲ್ಲಿನ ನಿವೃತ್ತ ನೌಕರರ ಮತ್ತು ದಿನಾಂಕ: 1.8.2024ರ ನಂತರ ನಿವೃತ್ತರಾದ ನೌಕರರ ಪಿಂಚಣಿ ನಿಗದಿಯಲ್ಲಿ ಯಾವುದೇ ಅಸಮಾನತೆ ಉಂಟಾಗಿರುವುದಿಲ್ಲ.</td></tr>
<tr><td>ಆ)</td><td>ಈ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಸದರಿ ವ್ಯತ್ಯಾಸ ಮೊತ್ತವನ್ನು ಯಾವ ಕಾಲಮಿತಿಯೊಳಗೆ ನೀಡಲಾಗುವುದು; ಈ ಬಗ್ಗೆ ನಿವೃತ್ತ ನೌಕರರಿಗೆ ಸಲ್ಲಬೇಕಾದ ವೇತನವನ್ನು ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ? (ವಿವರ ನೀಡುವುದು);</td></tr>
</table>

**ಆಇ-ಪಿಇಎನ್/554/2025**

(ಸಿದ್ದರಾಮಯ್ಯ)
ಮುಖ್ಯ ಮಂತ್ರಿ